ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 22–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | | | |
| 2 | | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಸರ್ವೋತ್ತಮ ಸೇವಾ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ರಾಜ್ಯ ಸರ್ಕಾರವು ಸರ್ಕಾರಿ ನೌಕರರಿಗೆ "ಸರ್ವೋತ್ತಮ ಸೇವಾ ರಾಜ್ಯ ಪ್ರಶಸ್ತಿ" ಯನ್ನು ಜನವರಿ 26, 2015 ರಂದು ನೀಡಲು ನಿರ್ಧರಿಸಿರುವ ಹಿನ್ನೆಲೆಯಲ್ಲಿ ಉತ್ತಮ ಸೇವೆಗೈದ ಮತ್ತು ಗುಣಾತ್ಮಕ ಆಡಳಿತ ನೀಡಿರುವ ಅಧಿಕಾರಿ/ನೌಕರರು ತಮ್ಮ ಸ್ವ ವಿವರ ಪರಿಚಯದೊಂದಿಗೆ ಅರ್ಜಿಯನ್ನು ಹಾಗೂ ನಿರ್ವಹಿಸುತ್ತಿರುವ ಕಾರ್ಯದ ಬಗ್ಗೆ ಕಿರು ಪರಿಚಯವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರ/ಕಾರ್ಯದರ್ಶಿಯವರ ಮುಖೇನ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಡಿಸೆಂಬರ್ 31, 2014 ರೊಳಗೆ ಸಲ್ಲಿಸಬೇಕಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)ಯ ಪ್ರಕಟಣೆ ತಿಳಿಸಿದೆ.

## ಸಚಿವ ಸಂಪುಟ ಸಭೆ

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ಸಚಿವ ಸಂಪುಟದ ಸಭೆಯು ಡಿಸೆಂಬರ್ 23 ರಂದು ಮಧ್ಯಾಹ್ನ 2.00 ಗಂಟೆಗೆ ವಿಧಾನ ಸೌಧದ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟದ ಸಭಾ ಮಂದಿರದಲ್ಲಿ ನಡೆಯಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಾರಿಗೆ ಅದಾಲತ್

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ಪ್ರಾದೇಶಿಕ ಸಾರಿಗೆ ಅಧಿಕಾರಿ, ಎಲೆಕ್ಟ್ರಾನಿಕ್ ಸಿಟಿ, ಬಿ.ಟಿ.ಎಂ. 4 ನೇ ಹಂತ, 2 ನೇ ಬ್ಲಾಕ್, ದೇವರ ಚಿಕ್ಕನಹಳ್ಳಿ ಬಸ್ ನಿಲ್ದಾಣದ ಹತ್ತಿರ, ಬೆಂಗಳೂರು ಇವರು 5–1–2015 ರಂದು ಮಧ್ಯಾಹ್ನ 3.00 ಗಂಟೆಗೆ ಸಾರಿಗೆ ಅದಾಲತ್ ಕಾರ್ಯಕ್ರಮ ನಡೆಸಲಿದ್ದಾರೆ. ಈ ಕಚೇರಿ ವ್ಯಾಪ್ತಿಗೆ ಸಂಬಂಧಿಸಿದ ಕುಂದು ಕೊರತೆಗಳಿದ್ದಲಿದೀ ಅದಾಲತ್‌ನಲ್ಲಿ ಇದರಲ್ಲಿ ಭಾಗವಹಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಹಿಳೆಯರಿಗಾಗಿ ಕಂಪ್ಯೂಟರ್ ತರಬೇತಿ

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಮಹಿಳಾ ತರಬೇತಿ ಯೋಜನೆಯಡಿ 2014–15 ನೇ ಸಾಲಿಗೆ ಕಿಯೋನಿಕ್ಸ್ ತರಬೇತಿ ಸಂಸ್ಥೆಗಳ ಮೂಲಕ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ನಿರುದ್ಯೋಗ ಮಹಿಳೆಯವರಿಗಾಗಿ 1) Accounting & Computer 2) DTP with Kannada Software 3) Web designing ನಲ್ಲಿ 3 ತಿಂಗಳ ಉಚಿತ ಕಂಪ್ಯೂಟರ್ ತರಬೇತಿಯನ್ನು ನೀಡಲಾಗುವುದು. ಆಸಕ್ತಿಯುಳ್ಳ ಅರ್ಹ ಮಹಿಳಾ ಅಭ್ಯರ್ಥಿಗಳು ಕಿಯೋನಿಕ್ಸ್ ಸಂಸ್ಥೆಯಲ್ಲಿ ಅರ್ಜಿ ಪಡೆದು ದಿನಾಂಕ 15–1–2015 ರ ಒಳಗೆ ಕಿಯೋನಿಕ್ಸ್ ಸಂಸ್ಥೆಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಕರ್ನಾಟಕ ಸ್ಟೇಟ್ ಎಲೆಕ್ಟ್ರಾನಿಕ್ಸ್ ಡೆವಲಪ್‌ಮೆಂಟ್ ಕಾರ್ಪೋರೇಷನ್, ಲಿಮಿಟೆಡ್, (ಕಿಯೋನಿಕ್ಸ್) 29/1 ನೆಲಮಹಡಿ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು ದೂರವಾಣಿ–080– 22206649 ನ್ನು ಸಂಪರ್ಕಿಸುವುದು.

## ಸಂದರ್ಶನ

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ಕರ್ನಾಟಕ ಲೋಕ ಸೇವಾ ಆಯೋಗವು ವಾರ್ತಾ ಇಲಾಖೆಯಲ್ಲಿನ ಹಿರಿಯ ಸಹಾಯಕ ನಿರ್ದೇಶಕರ 05 ಹುದ್ದೆಗಳಿಗೆ ದಿನಾಂಕ 3–1–2015 ರಂದು ಬೆಳಿಗ್ಗೆ 9–30 ಗಂಟೆಗೆ, ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು–560 001 ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ, ಸಂದರ್ಶನದ ವೇಳೆ, ದಿನಾಂಕ ಇತ್ಯಾದಿ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in/Home Page ನ್ನು ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನದ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಸಂದರ್ಶನಕ್ಕೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದೆಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಕೀ ಉತ್ತರ ಪ್ರಕಟ

**ಬೆಂಗಳೂರು:ಡಿಸೆಂಬರ್:22:(ಕರ್ನಾಟಕ ವಾರ್ತೆ):–**

ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ 25–9–2014 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳಿಗೆ ದಿನಾಂಕ 6–12–2014, 7–12–2014 , 8–12–2014 ಮತ್ತು 14–12–2014 ರಂದು ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರವನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in/Key Answers ನಲ್ಲಿ ಪ್ರಕಟಿಸಲಾಗಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಟೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ. 50/– ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) " ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು" ಇವರಿಗೆ ಕೀ– ಉತ್ತರದೊಂದಿಗೆ ಪ್ರಕಟಿಸಿದ ನಮೂನೆಯಲ್ಲಿ ದಿನಾಂಕ 31–12–2014 ರೊಳಗೆ (ಕಛೇರಿ ವೇಳೆಯಲ್ಲಿ) ಅಂಚಿತ ಮನವಿಯ ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ದಿನಾಂಕ 31–12–2014 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.